# ಉಚಿತ ಥರ್ಮಲ್ ಪರೀಕ್ಷಾ ಶಿಬಿರ

ಹತ್ತಿರದ ಆರ್.ಎನ್.ಶೆಟ್ಟಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ ಎಂದು ಅವ್ವ ಸೇವಾ ಟ್ರಸ್ಟ್ ನ ಕಾರ್ಯದರ್ಶಿ ಶಶಿ ಸಾಲಿ ಹೇಳಿದರು.

ನಗರದಲ್ಲಿಂದು ಪತ್ರಿಕಾಗೋಷ್ಠಿ ಏರ್ಪಡಿಸಿ ಮಾತನಾಡಿದ ಅವರು, ಅವ್ವ ಸೇವಾ ಟ್ರಸ್ಟ್ ಕಳೆದ 12 ವರ್ಷಗಳಿಂದ ಬಸವರಾಜ ಹೊರಟ್ಟಿ ಅವರ ಅಧ್ಯಕ್ಷತೆಯಲ್ಲಿ ರಾಜ್ಯಾದ್ಯಂತ ಹಲವಾರು ಸಾಮಾಜಿಕ ಕಾರ್ಯಗಳನ್ನು ಮಾಡುತ್ತಾ ಬಂದಿದೆ. ಅದರಂತೆ ಶೈಕ್ಷಣಿಕ, ಸಾಂಸ್ಕೃತಿಕ, ಪ್ರತಿಭಾ ಪುರಸ್ಕಾರ, ಕಡುಬಡವ ಜನರು ಆರ್ಥಿಕವಾಗಿ ಸದೃಢಗೊಂಡು ಬದುಕು ಕಟ್ಟಿಕೊಳ್ಳಲು ಪ್ರೋತ್ಸಾಹಿಸುವ ಕೆಲಸವನ್ನು ಮಾಡುತ್ತಾ ಬಂದಿದೆ. ಇದೀಗ ದೇಶದಲ್ಲಿ ಸ್ತನ ಕ್ಯಾನ್ಸರ್ ಹೆಚ್ಚಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಜನರಲ್ಲಿ ಜಾಗೃತಿ, ಚಿಕಿತ್ಸೆ ಕುರಿತು ಅರಿವು ಮೂಡಿಸುವ ಸಲುವಾಗಿ ಸ್ತನ ಕ್ಯಾನ್ಸರ್ ಕುರಿತು ಮುಂಜಾಗ್ರತಾ, ಉಚಿತ ಥರ್ಮಲ್ ಪರೀಕ್ಷಾ ಶಿಬಿರ ಹಮ್ಮಿಕೊಂಡಿದ್ದು, ಅಂದು ಶಿಬಿರವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟನೆ ಮಾಡಲಿದ್ದಾರೆ ಎಂದರು.

ಎಚ್.ಸಿ.ಜಿ.ಎನ್ ಎಮ್.ಆರ್.ಕ್ಯಾನ್ಸರ್ ಆಸ್ಪತ್ರೆಯ ಸಿಇಓ ಡಾ.ಜಯಕೀಶನ್ ಮಾತನಾಡಿ, ಭಾರತೀಯ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಒಂದನೇ ಸ್ಥಾನದಲ್ಲಿದೆ. ಪ್ರತಿ ಒಂದು ಲಕ್ಷ ಮಹಿಳೆಯರಲ್ಲಿ 26 ಮಹಿಳೆಯರು ಕ್ಯಾನ್ಸರ್ ಗೆ ಪೀಡಿತರಾಗುವ ಸಂಗತಿ ಬೆಳಕಿಗೆ ಬಂದಿದೆ. ಸಾವಿನ ಸರಾಸರಿ 12.7 ಪ್ರತಿಶತಃದಷ್ಟಿದೆ. ಸಾಮಾನ್ಯವಾಗಿ 50 ವರ್ಷಕ್ಕಿಂತ ಮೇಲ್ಪಟ್ಟ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಉಂಟಾಗುವ ಸಾಧ್ಯತೆಗಳಿದ್ದರು ಇತ್ತಿಚಿನ ದಿನಗಳಲ್ಲಿ ತಾರುಣ್ಯದಲ್ಲಿಯೇ ಕ್ಯಾನ್ಸರ್ ಆವರಿಸುತ್ತಿದೆ. ಇದಕ್ಕೆ ಕ್ಯಾನ್ಸರ್ ಕುರಿತ ಅರಿವು, ಮುಂಜಾಗ್ರತೆ ವಹಿಸದೇ ಇರುವುದೇ ಕಾರಣವಾಗಿದೆ. ಈ ನಿಟ್ಟಿನಲ್ಲಿ ಅಕ್ಟೋಬರ್ ತಿಂಗಳು ಜಾಗತಿಕ ಸ್ತನ ಕ್ಯಾನ್ಸರ್ ಮಾಸವಾಗಿ ಆಚರಿಸುವ ಸಂದರ್ಭದಲ್ಲಿ ಉಚಿತ ಆಧುನಿಕ ಸ್ಕ್ರೀನಿಂಗ್ ಪರೀಕ್ಷೆಯನ್ನು ನಡೆಸಲಾಗುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅವ್ವ ಸೇವಾ ಟ್ರಸ್ಟ್ ನ ಅಧ್ಯಕ್ಷ ಹಾಗೂ ಸಭಾಪತಿ ಬಸವರಾಜ ಹೊರಟ್ಟಿ, ಖಜಾಂಚಿ ರಾಜೇಂದ್ರ ರಡ್ಡಿ ಇದ್ದರು.

Sanjevani 06.10.2021

# ಅ.10 ರಂದು ಸ್ತನ ಕ್ಯಾನ್ಸರ್ ಮುಂಜಾಗ್ರತೆ, ಉಚಿತ ಥರ್ಮಲ್ ಪರೀಕ್ಷಾ ಶಿಬಿರ



ಹುಬ್ಬಳ್ಳಿ, ಅ6: ಅವ್ವ ಸೇವಾ ಟ್ರಸ್ಟ್ ಹುಬ್ಬಳ್ಳಿ,ಎಚ್.ಸಿ.ಎನ್.ಎಮ್.ಆರ್ ಕ್ಯಾನ್ಸರ್ ಆಸ್ಪತ್ರೆಯ ಸಹಯೋಗದಲ್ಲಿ ಶಿಕ್ಷಕಿಯರಿಗಾಗಿ ಸ್ತನ ಕ್ಯಾನ್ಸರ್ ಕುರಿತು ಮುಂಜಾಗ್ರತಾ, ಉಚಿತ ಥರ್ಮಲ್ ಪರೀಕ್ಷಾ ಶಿಬಿರವನ್ನು ಅಕ್ಟೋಬರ್ 10 ರಂದು ಬೆಳಿಗ್ಗೆ 10 ಗಂಟೆಗೆ ಇಲ್ಲಿನ ಇಂದಿರಾಗಾಜಿನ ಮನೆಯ

(ಎರಡನೇ ಪುಟ ನೋಡಿ)

Sanjevani 06.10.2021